## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1811 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀಮತಿ ಹೇಮಲತಾ ನಾಯಕ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 23.03.2026 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ 2025-26ನೇ ಸಾಲಿನಲ್ಲಿ ಪಡಿತರ ವ್ಯವಸ್ಥೆಯಡಿ ಎಷ್ಟು ಕುಟುಂಬಗಳಿಗೆ ಆಹಾರ ಧಾನ್ಯ ವಿತರಣೆ ಮಾಡಲಾಗಿದೆ; (ಜಿಲ್ಲಾವಾರು ಮಾಹಿತಿ ಒದಗಿಸುವುದು); | ರಾಜ್ಯದಲ್ಲಿ 2025-26ನೇ ಸಾಲಿನಲ್ಲಿ ಪಡಿತರ ವಿತರಣೆ ಮಾಡಿದ ಕುಟುಂಬಗಳ ಜಿಲ್ಲಾವಾರು ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| ಆ | 2025-26ರಲ್ಲಿ ಅನ್ನಭಾಗ್ಯ ಯೋಜನೆಯಡಿ ಎಷ್ಟು ಮೆಟ್ರಿಕ್ ಟನ್ ಅಕ್ಕಿ, ಗೋಧಿ ಮತ್ತು ಇತರೆ ಆಹಾರ ಧಾನ್ಯಗಳನ್ನು ಖರೀದಿಸಲಾಗಿದೆ; ಅದರ ಒಟ್ಟು ವೆಚ್ಚ ಎಷ್ಟು; | 2025-26ನೇ ಸಾಲಿನಲ್ಲಿ ಅನ್ನಭಾಗ್ಯ ಯೋಜನೆಯಡಿ ರಾಜ್ಯದ ಅರ್ಹ ಫಲಾನುಭವಿಗಳಿಗೆ ಹೆಚ್ಚುವರಿ 5 ಕೆ.ಜಿ.ಯಂತೆ 24,54,399 ಮೆ.ಟನ್ ಅಕ್ಕಿಯ ಪ್ರಮಾಣವನ್ನು ಖರೀದಿಸಲಾಗಿದೆ.<br>ಅನ್ನಭಾಗ್ಯ ಯೋಜನೆಯಡಿ ಅಕ್ಕಿ ಖರೀದಿಗಾಗಿ ಪ್ರತಿ ಮಾಹೆ ರೂ.47,707.00 ಲಕ್ಷಗಳ ಅಂದಾಜು ವೆಚ್ಚ ಭರಿಸಲಾಗುತ್ತಿದೆ. |
| ಇ | 2025-26ನೇ ಸಾಲಿನಲ್ಲಿ ರೇಷನ್ ಕಾರ್ಡ್ ಹೊಂದಿರುವ ಕುಟುಂಬಗಳ ಸಂಖ್ಯೆ ಎಷ್ಟು; ಕಳೆದ ಸಾಲಿನಲ್ಲಿ ಎಷ್ಟು ಹೆಚ್ಚಳ ಅಥವಾ ಇಳಿಕೆ ಆಗಿದೆ; | ದಿನಾಂಕ:22.02.2026 ರ ಅಂತ್ಯಕ್ಕೆ ರಾಜ್ಯದಲ್ಲಿ ಈ ಕೆಳಕಂಡ ಪಡಿತರ ಚೀಟಿಗಳು ಚಾಲ್ತಿಯಲ್ಲಿರುತ್ತವೆ. |

| ಕ್ರ.ಸಂ | ವಿವರ | ಪಡಿತರ ಚೀಟಿಗಳ ಸಂಖ್ಯೆ |
|---|---|---|
| 1 | ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿ | 10,47,080 |
| 2 | ಆದ್ಯತಾ ಪಡಿತರ ಚೀಟಿ | 1,14,38,886 |
| 3 | ಆದ್ಯತೇತರ ಪಡಿತರ ಚೀಟಿ | 29,71,601 |
| | ಒಟ್ಟು | 1,54,57,567 |

ದಿನಾಂಕ 22.02.2025 ನೇ ಸಾಲಿಗೆ ಹೋಲಿಸಿದಲ್ಲಿ, ಈ ಕೆಳಕಂಡ ಕೋಷ್ಟಕದಲ್ಲಿರುವ ಹೆಚ್ಚಳ ಹಾಗೂ ಇಳಿಕೆ ಆಗಿರುವ ವಿವರವನ್ನು ಅನುಬಂಧ-2 ರಲ್ಲಿ ಒದಗಿಸಲಾಗಿದೆ.

| | | |
|---|---|---|
| ಈ | 2025-26ರಲ್ಲಿ ರಾಜ್ಯದಲ್ಲಿ ಬೋಗಸ್ (ನಕಲಿ) ರೇಷನ್ ಕಾರ್ಡ್‌ಗಳನ್ನು ಪತ್ತೆ ಹಚ್ಚಲು ಕೈಗೊಂಡ ಕ್ರಮಗಳು ಯಾವುವು; ಇದುವರೆಗೆ ಎಷ್ಟು ಕಾರ್ಡ್‌ಗಳನ್ನು ರದ್ದುಗೊಳಿಸಲಾಗಿದೆ; | ಕೇಂದ್ರ ಸರ್ಕಾರದಿಂದ ಈ ಕೆಳಕಂಡ ವಿಧಗಳಲ್ಲಿ 7,76,206 ಶಂಕಾಸ್ಪದ ಪಡಿತರ ಫಲಾನುಭವಿಗಳನ್ನು ಗುರುತಿಸಲಾಗಿರುತ್ತದೆ.<br>1. CBDT Income Group Annual Income>1,20,000<br>2. GSTN Gross Turnover > 25 Lacs<br>3. MCA Individual as Director<br>4. PDS Duplicate RC Inter State<br>5. PDS Duplicate RC Intra State<br>6. PDS RC Member Above 100 Years<br>7. PDS Silent RC > 12 Months<br>8. PDS Silent RC 6-12 Months<br>9. PDS Single Member Below 18 Years<br>10. PM KISAN Land Holding >7.5 Acres<br>11. UIDAI Aadhaar Status Deceased<br>12. Vehicle Ownership value Owning Light Motor Vehicle<br>13. Vehicle Ownership value Owning Medium Motor Vehicle<br>14. Vehicle Ownership value Owning Other than Mentioned Above.<br>ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br>1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್‌ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ |

| | | |
|---|---|---|
| | | ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br><br>ಸದರಿ ಮಾನದಂಡಗಳ ಆಧಾರದ ಮೇಲೆ ಅನರ್ಹವೆಂದು ಕಂಡುಬಂದ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗುತ್ತಿದೆ. |
| ಉ | 2025-26ರಲ್ಲಿ ಪಡಿತರ ವಿತರಣೆಯಲ್ಲಿ ಉಂಟಾಗುತ್ತಿರುವ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು? | ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಪ್ರಕರಣ/FIR ದಾಖಲಿಸಿ ದಾಸ್ತಾನನ್ನು ಸರ್ಕಾರದ ವಶಕ್ಕೆ ತೆಗೆದುಕೊಂಡು ಇಂತಹ ಪ್ರಕರಣಗಳನ್ನು ಪತ್ತೆ ಮಾಡಿ ಅಗತ್ಯ ವಸ್ತುಗಳ ಕಾಯ್ದೆಯನ್ನು ಅನುಷ್ಠಾನಗೊಳಿಸಲು ಈ ಕೆಳಕಂಡಂಯೆ ಕ್ರಮವಹಿಸಲಾಗುತ್ತಿದೆ.<br>> ಪಡಿತರ ಅಕ್ಕಿಯ ದುರ್ಬಳಕೆಯನ್ನು ತಡೆಗಟ್ಟಲು ಇಲಾಖೆಯ ಅಧಿಕಾರಿಗಳು ಹಾಗೂ ಕಾರ್ಯನಿರ್ವಾಹಕ ಸಿಬ್ಬಂದಿಗಳಿಗೆ ಕಾಲ ಕಾಲಕ್ಕೆ ಮೇಲ್ವಿಚಾರಣೆ ಮಾಡುವಂತೆ ನಿರ್ದೇಶನ ನೀಡಿ ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುತ್ತದೆ.<br>> ಪಡಿತರ ಚೀಟಿದಾರರು ಪಡಿತರ ಅಕ್ಕಿಯನ್ನು ದುರ್ಬಳಕೆ ಮಾಡಿಕೊಂಡ ಪ್ರಕರಣಗಳು ಕಂಡುಬಂದಲ್ಲಿ ಸದರಿ ಪಡಿತರ ಚೀಟಿಗಳನ್ನು ರದ್ದು ಪಡಿಸಿ ಅಂತವರ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲು ನಿರ್ದೇಶಿಸಲಾಗಿದೆ.<br>> ನ್ಯಾಯಬೆಲೆ ಅಂಗಡಿ, ತಾಲ್ಲೂಕು, ಜಿಲ್ಲಾ, ಹಾಗೂ ರಾಜ್ಯ ಮಟ್ಟದಲ್ಲಿ ಜಾಗೃತಿ ಸಮಿತಿಗಳನ್ನು ರಚಿಸಿ ಪಡಿತರ ವಿತರಣೆಯನ್ನು ಪರಿಶೀಲಿಸಲಾಗುತ್ತಿದೆ.<br>> ಪ್ರತಿ ಮಾಹೆ ನ್ಯಾಯಬೆಲೆ ಅಂಗಡಿ ಮಟ್ಟದಲ್ಲಿ ಆಹಾರ ಅದಾಲತ್‌ಗಳನ್ನು ನಡೆಸಿ ಪಡಿತರ ಚೀಟಿದಾರರಿಗೆ ಪಡಿತರ ವಿತರಣೆ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ.<br>> ರಾಜ್ಯ ಮಟ್ಟದಲ್ಲಿ ಆಹಾರ ಜಾಗೃತ ದಳ ರಚಿಸಿ ಅಕ್ರಮಗಳ ಬಗ್ಗೆ ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ. |

ಇ- ಆನಾಸ 101 ಡಿಆರ್‌ಎ 2026

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಇಲಾಖಾ ಸಚಿವರು